**4ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಬೆಂಗಳೂರು**

**ಸಿಸಿ ನಂ. 6532/2016 ಚಾಸಾಃ 2 ಪ್ರಾಸಾಃ 2**

| | | |
|---|---|---|
| ಸಾಕ್ಷಿದಾರರ ಹೆಸರು | : | ಬೋರೇಗೌಡ |
| ತಂದೆಯ ಹೆಸರು | : | ಹೊನ್ನೇಗೌಡ |
| ವಯಸ್ಸು | : | 53 ವರ್ಷ |
| ವೃತ್ತಿ | : | ಖಾಸಗಿ ಕೆಲಸ |
| ವಾಸ | : | ಜೆ.ಪಿ.ನಗರ, ಬೆಂಗಳೂರು |

**ಸಾಕ್ಷಿಯನ್ನು ದಿಃ 05.10.2024 ರಂದು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

**ಮುಖ್ಯವಿಚಾರಣೆ: ಪ್ರಾಙ್ಞಾ ಹಿ.ಸಾ.ಸ.ಅ ರವರಿಂದಃ-**

ನಾನು ಕಳೆದ 30 ವರ್ಷಗಳಿಂದ ಬೆಂಗಳೂರಿನ ಶುಶ್ರೂತ ಮೆಡಿಕಲ್ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದೇನೆ. ಚಾಸಾ-1 ರವರು ನಮ್ಮ ಆಸ್ಪತ್ರೆಯಲ್ಲಿ 2013-14ನೇ ಸಾಲಿನಲ್ಲಿ ವೈದ್ಯರು ಮತ್ತು ಆಡಳಿತಾಧಿಕಾರಿಯಾಗಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದರು. ಆರೋಪಿ ವಿಜಯ್ ಕುಮಾರ್ ರವರು ನಮ್ಮ ಆಸ್ಪತ್ರೆಯಲ್ಲಿ ಸಿಸ್ಟಮ್ ಮ್ಯಾನೇಜರ್ ಆಗಿ ಕೆಲಸ ಮಾಡುತ್ತಿದ್ದರು. ಆರೋಪಿಯು ನಕಲಿ ಬಿಲ್ಲುಗಳನ್ನು ಸೃಷ್ಟಿಸಿ ನಮ್ಮ ಆಸ್ಪತ್ರೆಯ ಹಣವನ್ನು ತೆಗೆದುಕೊಂಡು ದುರುಪಯೋಗ ಮಾಡಿಕೊಂಡಿರುವುದು ನನಗೆ ತಿಳಿದು ಬಂದಿರುತ್ತದೆ. ಈ ಸಂಬಂಧ ಚಾಸಾ-1 ರವರು ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದರು.

ದೂರು ಸಲ್ಲಿಸಿದ ನಂತರ ಪೊಲೀಸರು ನಮ್ಮ ಆಸ್ಪತ್ರೆಗೆ ಬಂದು ಸ್ಥಳ ಪಂಚನಾಮೆ ಮಾಡಿರುತ್ತಾರೆ. ಸದರಿ ಪಂಚನಾಮೆಯನ್ನು ಮತ್ತು ತನ್ನ ಸಹಿಯನ್ನು ಸಾಕ್ಷಿದಾರರು ನೋಡಿ ಗುರ್ತಿಸಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರ್ತಿಸಿದ್ದು, ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ-2 ಬಿ ಎಂದು ಗುರ್ತಿಸಲಾಯಿತು. ಆ ಸಮಯದಲ್ಲಿ ನಾನು, ಚಾಸಾ-1 ಮತ್ತು 3 ರವರು ಹಾಜರಿದ್ದು ಸದರಿ ಪಂಚನಾಮೆಗೆ ಸಹಿ ಮಾಡಿರುತ್ತಾರೆ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ವಿ.ಎನ್.ಆರ್. ವಕೀಲರಿಂದಃ</u>**

ಪೊಲೀಸರು ಪಂಚನಾಮೆಗೆ ಸಾಕ್ಷಿಯಾಗಿ ಬರುವಂತೆ ನನಗೆ ಯಾವುದೇ ನೋಟೀಸು ಕೊಟ್ಟಿಲ್ಲ. ಪಂಚನಾಮೆಯ ದಿನಾಂಕ ಮತ್ತು ಸಮಯ ನನಗೆ ನಿಖರವಾಗಿ ಹೇಳಲು ಆಗುವುದಿಲ್ಲ. ಚಾಸಾ-1 ರವರು ನಿಪಿ-2 ಪಂಚನಾಮೆಗೆ ಸಹಿ ಮಾಡಿದ ದಿನಾಂಕಃ25.09.2014 ಎಂದರೆ ನನಗೆ ಗೊತ್ತಿಲ್ಲ. ಚಾಸಾ-1 ರವರು ಪಂಚನಾಮೆಗೆ ಆ ದಿನ ಸದರಿ ಸ್ಥಳದಲ್ಲಿ ಹಾಜರಿದ್ದು ಸಹಿ ಮಾಡಿಲ್ಲ ಎಂದರೆ ನನಗೆ ನೆನಪಿರುವುದಿಲ್ಲ. ನಿಪಿ-2 ಪಂಚನಾಮೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಸದರಿ ಆಸ್ಪತ್ರೆಯ ಸಿಬ್ಬಂದಿ ಆಗಿರುವುದರಿಂದ ಆಸ್ಪತ್ರೆ ಮೇಲಾಧಿಕಾರಿಗಳ ಸೂಚನೆಯಂತೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u>** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯ್ತು)

**ಓ.ಹೇ.ಕೇ.ಸ.ಇದೆ**

**4ನೇ ಎ.ಸಿ.ಜೆ.ಎಂ.ನ್ಯಾ.,**